## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಇ.ಸರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಿರಿಯೂರು ಇವರ ವಿರುದ್ಧ ಇಲಾಖಾ ವಿಚಾರಣೆ ಅಂತಿಮ ಆದೇಶ.

ಓದಲಾಗಿದೆ.

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಪತ್ರ ಸಂಖ್ಯೆ ಜಿಪಂ/ಆ(3)/ಸಿಪಿ/ ಸಿಆರ್-26/ 2014-15 ದಿನಾಂಕ 23-05-2014.
2. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 50 ಇಎನ್‌ಕ್ಯೂ 2014 ದಿನಾಂಕ 21.07.2015 ಮತ್ತು 22.12.2015
3. ವಿಚಾರಣಾಧಿಕಾರಿಯವರ ವರದಿ ದಿನಾಂಕ 30.03.2016
4. ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 50 ಇಎನ್‌ಕ್ಯೂ 2014 ದಿನಾಂಕ 12.05.2016
5. ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ 03.06.2016

### ಪ್ರಸ್ತಾವನೆ:

ಶ್ರೀ ಜಿ.ಇ.ಸುರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇವರು 2012-13ನೇ ಸಾಲಿನಲ್ಲಿ ಬರಪರಿಹಾರ ಯೋಜನೆಯಡಿ ಹಿರಿಯೂರು ತಾಲ್ಲೂಕು, ಕಂದಿಕೆರೆ ಗ್ರಾಮದಲ್ಲಿ ಕಿರುನೀರು ಸರಬರಾಜು ಯೋಜನೆಯ ಪುನಶ್ಚೇತನ ಕಾಮಗಾರಿಗೆ ಮಂಜೂರಾದ ರೂ. 8.89 ಲಕ್ಷಗಳ ಅನುದಾನದಡಿ ಕಂದಿಕೆರೆ ಗ್ರಾಮದಲ್ಲಿ ಕೊಳವೆ ಬಾವಿಯನ್ನು ಕೊರೆದು, ಪ್ರತ್ಯೇಕವಾಗಿ 2 ಸಿಸ್ಟರ್ನ್‌ಗಳನ್ನು ಅಳವಡಿಸಿದಂತೆ ಬಿಲ್ಲನ್ನು ತಯಾರಿಸಿ ಪಾವತಿಸಲಾಗಿದೆಯೆಂದು, ಆದರೆ ವಿದ್ಯುತ್ ಸಂಪರ್ಕಕ್ಕಾಗಿ ಬೆಸ್ಕಾಂ ಇಲಾಖೆಗೆ ಅರ್ಜಿ ಸಲ್ಲಿಸದೆ ನಿರ್ಲಕ್ಷಿಸಿದ್ದು, ನಂತರದಲ್ಲಿ ಸದರಿ ಕೊರೆದ ಕೊಳವೆ ಬಾವಿಯು ಬತ್ತಿ ಹೋದ ಕಾರಣ ಕಾಮಗಾರಿಯು ನಿರರ್ಥಕವಾಗಿ ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಸಮರ್ಪಕವಾಗಿ ಮಾಡಲು ವಿಫಲರಾಗಿ ಎಸಗಿರುವ ಕರ್ತವ್ಯ ಲೋಪ / ದುರ್ನಡತೆಯ ಆರೋಪಗಳ ಬಗ್ಗೆ ಸದರಿಯವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಕೋರಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ರವರು ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 23.05.2014ರ ಪತ್ರದ ಜೊತೆ ಸಲ್ಲಿಸಿದ್ದ ಪ್ರಸ್ತಾವನೆ ಸಲ್ಲಿಸಿದ್ದರು.

ಸರ್ಕಾರವು ಶ್ರೀ ಜಿ.ಇ.ಸುರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹಿರಿಯೂರು ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರಡಿಯಲ್ಲಿ ನಡೆಸಲು ತೀರ್ಮಾನಿಸಿ ದಿನಾಂಕ 11.09.2014ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿಮಾಡಲಾಗಿತ್ತು.

ಪ್ರತಿಯಾಗಿ ಶ್ರೀ ಜಿ.ಇ.ಸುರೇಂದ್ರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ದಿನಾಂಕ 20.04.2015 ರಂದು ಸಲ್ಲಿಸಿದ್ದ ಲಿಖಿತ ಹೇಳಿಕೆಯಲ್ಲಿ ತಮ್ಮ ಮೇಲಿನ ಆರೋಪಗಳನ್ನು ಅಲ್ಲಗಳೆದು ತಮ್ಮನ್ನು ಆರೋಪ ಮುಕ್ತರನ್ನಾಗಿಸಬೇಕೆಂದು ಕೋರಿದ್ದರು. ಆದ್ದರಿಂದ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯಲು ವಿವರವಾದ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ, ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 21.07.2015ರ ಆದೇಶದಲ್ಲಿ ಶ್ರೀ ಕೆ. ರಾಜಶೇಖರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಲಾಗಿತ್ತು. ಆದರೆ, ಸದರಿಯವರು ತಮ್ಮ ಆರೋಗ್ಯ ಸಮಸ್ಯೆಯಿಂದಾಗಿ ವಿಚಾರಣೆ ನಡೆಸಲು ಸಾಧ್ಯವಿಲ್ಲವೆಂದು ತಿಳಿಸಿದ ಪ್ರಯುಕ್ತ ದಿನಾಂಕ 22.12.2015ರ ಆದೇಶದಲ್ಲಿ ಶ್ರೀ ಎನ್.ಸುಬ್ಬರಾವ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಅದರಂತೆ ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಕೈಗೊಂಡು ಮೇಲೆ ಕ್ರಮ ಸಂಖ್ಯೆ (3)ರಂತೆ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆರೋಪ ಭಾಗಶ: (ವಿದ್ಯುತ್ ಜೋಡಣೆಗೆ ಬೆಸ್ಕಾಂ ಇಲಾಖೆಗೆ ಅರ್ಜಿ ಸಲ್ಲಿಸದಿರುವುದು ಮಾತ್ರ) ರುಜುವಾತಾಗುತ್ತದೆ ಎಂದು ಅಭಿಪ್ರಾಯ ಪಟ್ಟಿರುತ್ತಾರೆ.

ಆಪಾದಿತ ಅಧಿಕಾರಿಯ ವಿರುದ್ಧದ ಭಾಗಶ: ಆರೋಪವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವುದರಿಂದ ವಿಚಾರಣಾ ವರದಿಯನ್ನು ಆಧರಿಸಿ ಕ್ರಮ ಕೈಗೊಳ್ಳುವ ಪೂರ್ವದಲ್ಲಿ ಆಪಾದಿತ ಅಧಿಕಾರಿಗೆ ವಿಚಾರಣಾ ವರದಿಯ ಪ್ರತಿಯೊಂದಿಗೆ ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 12.05.2016ರ 2ನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಪ್ರತಿಯಾಗಿ ಆಪಾದಿತ ಅಧಿಕಾರಿಯು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಅಂದಾಜಿನಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಕಾಶ ಮಾಡದೇ ಇದ್ದುದರಿಂದ ಹಾಗೂ ವಿದ್ಯುತ್ ಕಲ್ಪಿಸುವ ಇತರೇ ಕಾಮಗಾರಿಗಳು ಬಹಳ ಇದ್ದುದರಿಂದ ಬೆಸ್ಕಾಂನವರು ರಿಜಿಸ್ಟರ್ ಮಾಡಿಕೊಳ್ಳುವುದನ್ನು ಮುಂದೂಡಿ ನಂತರ ರಿಜಿಸ್ಟರ್ ಮಾಡಿರುತ್ತಾರೆಂದು, ಬರಗಾಲದ ಪ್ರಯುಕ್ತ ಕೊಳವೆ ಬಾವಿ ಬತ್ತಿ ಹೋದ ಕಾರಣ ವಿದ್ಯುತ್ ಸಂಪರ್ಕ ಕೊಡಲು ಸಾಧ್ಯವಾಗಿಲ್ಲವೆಂದು, ತಾವು ಯಾವುದೇ ಸರ್ಕಾರದ ಹಣ ದುರುಪಯೋಗಕ್ಕೆ ಕಾರಣರಾಗಿಲ್ಲದ ಕಾರಣ ತಮ್ಮ ಮೇಲಿನ ವಿಚಾರಣೆಯಿಂದ ಆರೋಪ ಮುಕ್ತರನ್ನಾಗಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಕಾಮಗಾರಿ ಅಂದಾಜು ಪಟ್ಟಿಯನ್ನು ಆಪಾದಿತ ಅಧಿಕಾರಿಯವರೇ ತಯಾರಿಸಿದ್ದು, ಅಂದಾಜು ಪತ್ರಿಕೆ ತಯಾರಿಸುವ ಸಂದರ್ಭದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಅವಶ್ಯವಿರುವ ಮೊತ್ತವನ್ನು ಡಿಪಾಸಿಟ್ ಮಾಡುವ ಕುರಿತಂತೆ ಅವಕಾಶ ಕಲ್ಪಿಸಿಕೊಳ್ಳುವುದು ಅವರ ಆದ್ಯ ಕರ್ತವ್ಯವಾಗಿತ್ತು. ಆದರೆ, ಈ ರೀತಿ ಅವಕಾಶ ಕಲ್ಪಿಸದೇ ಇರುವುದು ಅವರ ಪ್ರಮುಖ ಕರ್ತವ್ಯ ಲೋಪಗಳಲ್ಲಿ ಒಂದಾಗಿರುತ್ತದೆ. ಹಾಗಾಗಿ ವಿಚಾರಣಾ ವರದಿಯ ಕುರಿತಂತೆ ಆಪಾದಿತ ಅಧಿಕಾರಿಯು ಸಲ್ಲಿಸಿರುವ ಆಕ್ಷೇಪಣೆಯಲ್ಲಿ ಯಾವುದೇ ಪರಿಗಣನಾರ್ಹವಾದ ಅಂಶಗಳು ಕಂಡುಬಂದಿರುವುದಿಲ್ಲ. ಆಪಾದಿತ ಅಧಿಕಾರಿಯು ಎಸಗಿರುವ ದುರ್ನಡತೆ / ಕರ್ತವ್ಯ ಲೋಪ ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವುದರಿಂದ

ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ ಗ್ರಾಅಪ 50 ಇಎನ್‌ಕ್ಯೂ 2014 ಬೆಂಗಳೂರು, ದಿನಾಂಕ. 12.01.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಜಿ.ಇ.ಸರೇಂದ್ರ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಹಾಲಿ ನಿವೃತ್ತ), ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಿರಿಯೂರು ಇವರ ವಿರುದ್ಧ ಸಾಬೀತಾದ ಆರೋಪಗಳ ಗಂಭೀರತೆಗೆ ಅನುಗುಣವಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (1)(ಬಿ)ರ ಅನುಸಾರ ಸದರಿಯವರ ನಿವೃತ್ತಿ ವೇತನದಲ್ಲಿ ಮಾಸಿಕ ರೂ. 500-00 ಗಳನ್ನು ಒಂದು ವರ್ಷದ ಅವಧಿಗೆ ಕಡಿತಗೊಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ಲೋಕ ಸೇವಾ ಆಯೋಗವು ಪತ್ರ ಸಂಖ್ಯೆ PSC 231 CNS 16 ದಿನಾಂಕ 19.12.2016ರಲ್ಲಿ ಸಹಮತಿ ನೀಡಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ್ ಪೋತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ - (ನೋಂದಾಯಿತ ಅಂಚೆ ಮುಖಾಂತರ)
6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಿತ್ರದುರ್ಗ - (ನೋಂದಾಯಿತ ಅಂಚೆ ಮುಖಾಂತರ)
7. ಉಪ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
8. ಶ್ರೀ ಜಿ.ಎ.ಸುರೇಂದ್ರ, ನಿವೃತ್ತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, 1/60, ಎನ್.ಹೆಚ್.13, ಬಸವೇಶ್ವರ ನಗರ, ಚಿತ್ರದುರ್ಗ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಅಪರ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.